ಓ.ಎಸ್.ನಂ.150/2014

ಪಿ ಡಬ್ಲ್ಯೂ-1

**ದಿಃ 23-09-2021 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಹೆಚ್ ಎಸ್ ವಕೀಲರಿಂದ.**

ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರದಲ್ಲಿರುವ ಎಲ್ಲಾ ಸಂಗತಿಗಳು ನನ್ನ ಸ್ವಂತ ಮಾಹಿತಿ ಮೇರೆಗೆ ಹೇಳಿ ಬರೆಸಿದ್ದು ಅವು ಸತ್ಯವಾಗಿರುತ್ತವೆ. ಪ್ರಮಾಣಪತ್ರದಲ್ಲಿನ ಸಂಗತಿಗಳನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ನಾನು ನ್ಯಾಯಾಲಯಕ್ಕೆ ದಿಃ 26-07-2010 ರ ಕ್ರಯಪತ್ರದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿರುತ್ತೇನೆ, ಅದನ್ನು ನಿಪಿ-1 ಎಂದು ಗುರುತಿಸಲಾಯಿತು. ದಿಃ 03-03-2012 ರ ಕ್ರಯಪತ್ರದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿರುತ್ತೇನೆ, ಅದನ್ನು ನಿಪಿ-2 ಎಂದು ಗುರುತಿಸಲಾಯಿತು. ಕಂದಾಯ ರಸೀದಿಯನ್ನು ಹಾಜರುಪಡಿಸಿರುತ್ತೇನೆ, ಅದನ್ನು ನಿಪಿ-3 ಎಂದು ಗುರುತಿಸಲಾಯಿತು. ಎರಡು ಪೋಟೋ ಮತ್ತು ಒಂದು ಸಿಡಿಯನ್ನು ಹಾಜರುಪಡಿಸಿರುತ್ತೇನೆ, ಅವುಗಳನ್ನು ಕ್ರಮವಾಗಿ ನಿಪಿ-4 ರಿಂದ ನಿಪಿ-6 ಎಂದು ಗುರುತಿಸಲಾಯಿತು. ನಾಲ್ಕು ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿರುತ್ತೇನೆ, ಅವುಗಳನ್ನು ಕ್ರಮವಾಗಿ ನಿಪಿ-7 ರಿಂದ ನಿಪಿ-10 ಎಂದು ಗುರುತಿಸಲಾಯಿತು. ನಾಲ್ಕು ಮ್ಯೂಟೇಷನ್ ಪ್ರತಿಗಳನ್ನು ಹಾಜರುಪಡಿಸಿರುತ್ತೇನೆ, ಅವುಗಳನ್ನು ಕ್ರಮವಾಗಿ ನಿಪಿ-11 ರಿಂದ ನಿಪಿ-14 ಎಂದು ಗುರುತಿಸಲಾಯಿತು. ಎರಡು ಸರ್ವೆ ನಕಾಸೆ ಯನ್ನು ಹಾಜರುಪಡಿಸಿರುತ್ತೇನೆ, ಅವುಗಳನ್ನು ನಿಪಿ-15 ಮತ್ತು ನಿಪಿ-16 ಎಂದು ಗುರುತಿಸಲಾಯಿತು. ನೋಟೀಸು ಮತ್ತು ಮಹಜರ್ ನ ಪ್ರತಿಗಳನ್ನು ಹಾಜರುಪಡಿಸಿರುತ್ತೇನೆ, ಅವುಗಳನ್ನು ಕ್ರಮವಾಗಿ ನಿಪಿ-17 ಮತ್ತು ನಿಪಿ-18 ಎಂದು ಗುರುತಿಸಲಾಯಿತು. ಎರಡು ದೂರಿನ ಸ್ವೀಕೃತಿ ಪ್ರತಿಗಳನ್ನು ಹಾಜರುಪಡಿಸಿರುತ್ತೇನೆ, ಅವುಗಳನ್ನು ಕ್ರಮವಾಗಿ ನಿಪಿ-19 ಮತ್ತು ನಿಪಿ-20 ಎಂದು ಗುರುತಿಸಲಾಯಿತು. ಎಫ್ ಐ ಆರ್ ನ ಪ್ರತಿಯನ್ನು ಹಾಜರುಪಡಿಸಿರುತ್ತೇನೆ, ಅದನ್ನು ನಿಪಿ-21 ಎಂದು ಗುರುತಿಸಲಾಯಿತು. ಪೊಲೀಸ್ ದೂರಿನ ಪ್ರತಿಯನ್ನು ಹಾಜರುಪಡಿಸಿರುತ್ತೇನೆ, ಅದನ್ನು ನಿಪಿ-22 ಎಂದು ಗುರುತಿಸಲಾಯಿತು. ನಾಲ್ಕು ಪೋಟೊ ಮತ್ತು ಒಂದು ಸಿಡಿಯನ್ನು ಹಾಜರುಪಡಿಸಿರುತ್ತೇನೆ, ಅವುಗಳನ್ನು ಕ್ರಮವಾಗಿ ನಿಪಿ-23 ರಿಂದ ನಿಪಿ-27 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಪ್ರತಿವಾದಿ ಪರ ಶ್ರೀ ಕೆ ಎಲ್ ಆರ್  ವಕೀಲರಿಂದಃ**

ಪಾಟೀ ಸವಾಲಿಗೆ ಸಮಯಾವಕಾಶ ಕೋರಿದ್ದು, ಸಮಯಾವಕಾಶ ನೀಡಿ ಮುಂದೂಡಲಾಯ್ತು.

*(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)*

ಓ. ಕೇ. ಸ. ಇ. ಎ. ಒ.

Sd/-

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು

ಪ್ರ.ದ.ನ್ಯಾ.ದಂ. ರವರು, ತರೀಕೆರೆ.